ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

55

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE :

# ದ್ರೌಪದಿಗೆ ಅಪಮಾನ ಆರೋಪ: ಭೈರಪ್ಪ ವಿರುದ್ಧ ಕ್ರಮಕ್ಕೆ ಆಗ್ರಹ

## ವಹ್ನಿಕುಲದ ಆದಿ ಶಕ್ತಿ ಬಗ್ಗೆ ಅವಹೇಳನ: ರಮೇಶ್

ವಿಧಾನ ಪರಿಷತ್: ಹಿರಿಯ ಸಾಹಿತಿ ಎಸ್. ಎಲ್. ಭೈರಪ್ಪ ಅವರು ಇತ್ತೀಚೆಗೆ ಕಾರ್ಯಕ್ರಮವೊಂದರಲ್ಲಿ ಮಹಾಭಾರತದ ದ್ರೌಪದಿ ಬಗ್ಗೆ ಅಸಭ್ಯ ರೀತಿಯಲ್ಲಿ ಮಾತನಾಡುವ ಮೂಲಕ ವಹ್ನಿಕುಲ ಸಮಾಜದ ಆರಾಧಿಸುವ ಆದಿ ಪರಾಶಕ್ತಿಗೆ ಅಪಮಾನ ಮಾಡಿದ್ದು, ಸಮಾಜದ ಸ್ವಾಸ್ಥ್ಯ ಹಾಳು ಮಾಡಿದ್ದಾರೆ. ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕೆಂದು ಕಾಂಗ್ರೆಸ್‌ನ ಪಿ.ಆರ್. ರಮೇಶ್ ಸರ್ಕಾರಕ್ಕೆ ಆಗ್ರಹಿಸಿದ್ದಾರೆ.

ಶೂನ್ಯ ವೇಳೆಯಲ್ಲಿ ವಿಷಯ ಪ್ರಸ್ತಾಪಿಸಿದ ಅವರು, ಎಸ್.ಎಲ್. ಭೈರಪ್ಪ ಅವರು, 'ದ್ರೌಪದಿ ಆಕರ್ಷಕ ಹೆಣ್ಣು, ಹಾಗಾಗಿ ಹತ್ತಾರು ಜನರ ಕಣ್ಣು ಅವಳ ಮೇಲಿತ್ತು' ಎಂದೆಲ್ಲಾ ಹೇಳಿದ್ದಾರೆ. ಅವರ ಹೇಳಿಕೆ ಅಸಂಬದ್ಧ ಹಾಗೂ ಅಸಭ್ಯದಿಂದ ಕೂಡಿದೆ. ತಮ್ಮ ಕಲ್ಪನೆ ಮೂಲಕ ಪಾತ್ರಗಳನ್ನು ತಮಗೆ ಬಂದಂತೆ ಚಿತ್ರಿಸುವ ಭೈರಪ್ಪ ಅವರ ಹೇಳಿಕೆ ಸಮಾಜದ ಸ್ವಾಸ್ಥ್ಯವನ್ನು ಹಾಳು ಮಾಡುವಂತಾಗಿದೆ. ಈ ಸಂಬಂಧ ಈಗಾಗಲೇ ದೂರು ಸಲ್ಲಿಸಲಾಗಿದೆ. ಧಾರ್ಮಿಕ ಭಾವನೆಗೆ ಧಕ್ಕೆ ತಂದಿರುವ ಕಾರಣ ಅವರ ಮೇಲೆ ಐಪಿಸಿ 295/ಎ, 298, 505, 153, 153/ಎ ಅನ್ವಯ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು. ಇದಕ್ಕೂ ಮುನ್ನ ಶೂನ್ಯ ವೇಳೆಯಲ್ಲಿ ರಮೇಶ್ ಈ ವಿಷಯ ಪ್ರಸ್ತಾಪಿಸಲು ಮುಂದಾದಾಗ, ಸಭಾಪತಿ ಬಸವರಾಜ ಹೊರಟ್ಟಿ ಈ ಬಗ್ಗೆ ತಮ್ಮೊಂದಿಗೆ ಚರ್ಚಿಸಬೇಕೆಂದು ಹೇಳಿ ಪ್ರಸ್ತಾಪಿಸಲು ಅವಕಾಶ ನೀಡಲಿಲ್ಲ. ಇದರಿಂದ ತೀವ್ರ ಕೆರಳಿದ ರಮೇಶ್, ಒಂದು ಸಮಾಜ ಆರಾಧಿಸುವ ದೇವತೆ ಬಗ್ಗೆ ಮಾತನಾಡಿದ ವಿಷಯವನ್ನು ಶೂನ್ಯವೇಳೆ ಪ್ರಸ್ತಾಪಿಸಲು ಅವಕಾಶ ನೀಡದಕ್ಕೆ ಪ್ರತಿಭಟನೆಗೆ ಮುಂದಾದರು. ನಂತರ ಕೆಲವು ನಿಮಿಷಗಳ ನಂತರ ಪ್ರಸ್ತಾಪಿಸಲು ಅವಕಾಶ ನೀಡಿದರು.